ಕರ್ನಾಟಕ ಸರ್ಕಾರ

ಜೂನ್ 21, 2017

## ಸಹಕಾರಿ ಸಂಸ್ಥೆಗಳ ಮೂಲಕ ರಾಜ್ಯದ ರೈತರು ಪಡೆದಿರುವ ಐವತ್ತು ಸಾವಿರ ರೂ ವರೆಗಿನ ಅಲ್ಪಾವಧಿ ಬೆಳೆ ಸಾಲ ಮನ್ನಾ : ಸಿದ್ಧರಾಮಯ್ಯ



ಬೆಂಗಳೂರು, ಜೂನ್ 21:

ಸಹಕಾರಿ ಸಂಸ್ಥೆಗಳ ಮೂಲಕ ರಾಜ್ಯದ ರೈತರು ಪಡೆದಿರುವ ಐವತ್ತು ಸಾವಿರ ರೂ ವರೆಗಿನ ಅಲ್ಪಾವಧಿ ಬೆಳೆ ಸಾಲ ಮನ್ನಾ ಮಾಡುವ ರಾಜ್ಯ ಸರ್ಕಾರದ ಐತಿಹಾಸಿಕ ನಿರ್ಧಾರವನ್ನು ರಾಜ್ಯ ವಿಧಾನ ಸಭೆಯಲ್ಲಿ ಬುಧವಾರ ಪ್ರಕಟಿಸಿದ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಸರ್ಕಾರದ ಈ ನಿರ್ಧಾರದಿಂದ 22,27,506 ರೈತರಿಗೆ ಲಾಭವಾಗಲಿದೆ ಎಂದರು.

2017–18 ನೇ ಸಾಲಿನ ಆಯವ್ಯಯದ ಇಲಾಖಾವಾರು ಬೇಡಿಕೆಗಳ ಮೇಲಿನ ಚರ್ಚೆಗೆ ಉತ್ತರಿಸುತ್ತಿದ್ದ ಸಿದ್ದರಾಮಯ್ಯ ಅವರು ರಾಷ್ಟ್ರೀಕೃತ ಹಾಗೂ ವಾಣಿಜ್ಯ ಬ್ಯಾಂಕ್‌ಗಳನ್ನು ಒಳಗೊಂಡಂತೆ ರಾಜ್ಯದ ರೈತರು ಒಟ್ಟು ಎಲ್ಲಾ ಮೂಲಗಳಿಂದ 1,16,006 ಕೋಟಿ ರೂ ಸಾಲ ಪಡೆದಿದ್ದಾರೆ. ಇದರಲ್ಲಿ ಅಲ್ಪಾವಧಿ ಸಾಲದ ಮೊತ್ತ 52,000 ಕೋಟಿ ರೂ ಇದೆ. ಈ ಪೈಕಿ ಸಹಕಾರಿ ಸಂಸ್ಥೆಗಳ ಮೂಲಕ ಪಡೆದ ಸಾಲದ ಪ್ರಮಾಣ 10,736 ಕೋಟಿ ರೂ ಆಗಿದೆ.

ದೂರದ ಪಂಜಾಬ್, ನೆರೆಯ ಮಹಾರಾಷ್ಟ್ರ ಸೇರಿದಂತೆ ದೇಶದ ವಿವಿಧೆಡೆಗಳಲ್ಲಿ ಬೆಳೆ ಸಾಲ ಮನ್ನಾ ಮಾಡಬೇಕೆಂದು ರೈತರು ಚಳುವಳಿಗಳು ಹಾಗೂ ಪ್ರತಿಭಟನೆಗಳನ್ನು ನಡೆಸಿದ್ದಾರೆ. ಆದರೆ, ನಮ್ಮ ರಾಜ್ಯದಲ್ಲಿ ರೈತರು ಯಾವುದೇ ಚಳುವಳಿ ಹಾಗೂ ಪ್ರತಿಭಟನೆಗಳನ್ನು ನಡೆಸದಿದ್ದರೂ, ಕಳೆದ ಮೂರು ವರ್ಷಗಳಿಂದ ಸತತವಾಗಿ ಬರವನ್ನು ಎದುರಿಸುತ್ತಿರುವ ರಾಜ್ಯದ ರೈತರ ಸಂಕಷ್ಟಕ್ಕೆ ಸ್ಪಂದಿಸಿ ಕೃಷಿ ಹಾಗೂ ಕೃಷಿಕರ ಹಿತದೃಷ್ಟಿಯಿಂದ ಇದೇ ಜೂನ್ 20 ರಂತೆ ಬಾಕಿ ಇರುವ ಐವತ್ತು ಸಾವಿರ ರೂ ವರೆಗಿನ ಬೆಳೆ ಸಾಲವನ್ನು ಮನ್ನಾ ಮಾಡಲು ತೀರ್ಮಾನಿಸಲಾಗಿದೆ. ಅಂತೆಯೇ, ಎಲ್ಲಾ ವರ್ಗದ ರೈತರಿಗೆ ಅನ್ವಯಿಸುವ ಈ ಸಾಲ ಮನ್ನಾ ಕುರಿತ

ಸರ್ಕಾರಿ ಆದೇಶವನ್ನೂ ಕೂಡಲೇ ಹೊರಡಿಸಲಾಗುತ್ತದೆ. ಸರ್ಕಾರದ ಈ ತೀರ್ಮಾನದಿಂದ ರಾಜ್ಯ ಸರ್ಕಾರಕ್ಕೆ 8165 ಕೋಟಿ ರೂ. ಹೊರೆ ಬೀಳಲಿದೆ ಎಂದು ವಿವರಿಸಿದರು.

ವಾಣಿಜ್ಯ ಮತ್ತು ಇತರೆ ಬ್ಯಾಂಕುಗಳಲ್ಲಿ ರಾಜ್ಯದ ರೈತರು ಪಡೆದಿರುವ ಕೃಷಿ ಸಾಲದ ಅರ್ಧದಷ್ಟು ಮೊತ್ತವನ್ನು ಕೇಂದ್ರ ಸರ್ಕಾರವು ಮನ್ನಾ ಮಾಡಿದರೆ, ಅದೇ ಮಾದರಿಯಲ್ಲೇ ರಾಜ್ಯ ಸರ್ಕಾರವೂ ಕೂಡಾ ಸಹಕಾರಿ ಸಂಸ್ಥೆಗಳಿಂದ ರಾಜ್ಯದ ರೈತರು ಪಡೆದಿರುವ ಕೃಷಿ ಸಾಲದ ಅರ್ಧದಷ್ಟು ಮೊತ್ತವನ್ನು ಮನ್ನಾ ಮಾಡಲು ಸಿದ್ಧವಿದೆ ಎಂದು ಪ್ರಧಾನ ಮಂತ್ರಿಯವರಿಗೆ, ಕೇಂದ್ರ ಹಣಕಾಸು ಸಚಿವರಿಗೆ ಮೇಲಿಂದ ಮೇಲೆ ಪತ್ರಗಳನ್ನೂ ಬರೆದರೂ ಈವರೆಗೂ ಯಾವುದೇ ಸ್ಪಂದನೆ ದೊರೆತಿಲ್ಲ.

ಒಂದೆಡೆ, ಸಾಲ ಮನ್ನಾ ಸಾಧುವಲ್ಲ ಎಂದು ಭಾರತೀಯ ರಿಸರ್ವ್ ಬ್ಯಾಂಕ್ ಗವರ್ನರ್ ಊರ್ಜಿತ್ ಪಟೇಲ್ ಅವರು ಹೇಳಿಕೆ ನೀಡಿದ್ದಾರೆ. ಮತ್ತೊಂದೆಡೆ ಸಾಲ ಮನ್ನಾ ಸಾಧ್ಯವಿಲ್ಲ ಎಂದು ಕೇಂದ್ರ ಹಣಕಾಸು ಸಚಿವ ಅರುಣ್ ಜೇಟ್ಲಿ ಅವರು ಸ್ಪಷ್ಟಪಡಿಸಿದ್ದಾರೆ. ಆದರೆ, ತಾವು ಆಯವ್ಯಯವನ್ನು ರೂಪಿಸುವಾಗ ಸದಾ ಕಾಲ ರೈತರು, ಬಡವರು, ದಲಿತರು, ಹಿಂದುಳಿದವರು, ಶೋಷಿತರು ಹಾಗೂ ದುರ್ಬಲರೇ ತಮ್ಮ ಕಣ್ಣ ಮುಂದೆ ಬರುತ್ತಾರೆ. ಈ ಹಿನ್ನೆಲೆಯಲ್ಲಿ ತಾವು ರಾಜ್ಯದ ರೈತರ ಅಲ್ಪಾವಧಿ ಬೆಳೆ ಸಾಲವನ್ನು ಮನ್ನಾ ಮಾಡುವ ಮಹತ್ವಯುತ ನಿರ್ಧಾರವನ್ನು ಕೈಗೊಂಡಿರುವುದಾಗಿ ಮುಖ್ಯಮಂತ್ರಿ ತಿಳಿಸಿದರು.

ರಾಜ್ಯದಲ್ಲಿ ಆರು ವರ್ಷಗಳಿಂದ ಅದರಲ್ಲೂ ಸತತವಾಗಿ ಮೂರು ವರ್ಷಗಳಿಂದ ಭೀಕರ ಬರ ಇದೆ. ಎರಡು ಜಲಾಶಯಗಳನ್ನು ಹೊರತುಪಡಿಸಿ ಯಾವುದೇ ಜಲಾಶಯದಲ್ಲಿ ಶೇಕಡಾ 50 ರಷ್ಟು ನೀರಿನ ಮಟ್ಟ ತಲುಪಿಲ್ಲ. ಜೂನ್ ತಿಂಗಳಲ್ಲಿ ಮುಂಗಾರು ಮಳೆ ಬರುತ್ತದೆ ಎಂದು ನಿರೀಕ್ಷಿಸಿದ್ದರೂ ಕೃಷ್ಣರಾಜ ಸಾಗರ ಜಲಾಶಯಕ್ಕೆ ಒಂದು ಅಡಿ ನೀರೂ ಬಂದಿಲ್ಲ. ಕಬಿನಿ ಜಲಾಶಯಕ್ಕೆ ಕೇವಲ ಎಂಟು ಅಡಿ ನೀರು ಬಂದಿದೆ. ಕೇರಳದ ವೈನಾಡ್‌ನಲ್ಲಿ ಮಳೆಯಾದರೆ ಕಾವೇರಿ ನದಿಗೆ ನೀರು ಬರುತ್ತದೆ. ಮಲೆನಾಡಿನಲ್ಲೂ ತೃಪ್ತಿಕರವಾಗಿ ಮಳೆಯಾಗಿಲ್ಲ. ಉತ್ತರ ಕರ್ನಾಟಕ್ಕೆ ಹೋಲಿಸಿದರೆ ದಕ್ಷಿಣ ಕರ್ನಾಟಕದಲ್ಲಿ ಮಳೆಯ ಪ್ರಮಾಣ ಗಣನೀಯವಾಗಿ ಕುಸಿದಿದೆ. ಎಲ್ಲಕ್ಕೂ ಮಿಗಿಲಾಗಿ ಹವಾಮಾನ ಇಲಾಖೆಯ ಮುನ್ಸೂಚನೆಗಳೂ ಕೂಡ ಹುಸಿಯಾಗುತ್ತಿದೆ.

ಅನ್ನಭಾಗ್ಯ ಯೋಜನೆಯಡಿ ಏಪ್ರಿಲ್‌ನಿಂದ ಏಳು ಕೆ ಜಿ ಅಕ್ಕಿ ನೀಡಲಾಗುತ್ತಿದೆ. ಕ್ಷೀರಭಾಗ್ಯ ಯೋಜನೆಯನ್ನು ಮೂರು ದಿನಗಳಿಂದ ಐದು ದಿನಗಳಿಗೆ ವಿಸ್ತರಿಸಿದೆ. ಮಕ್ಕಳಿಗೆ ಮಧ್ಯಾಹ್ನದ ಬಿಸಿಯೂಟ ನೀಡಲಾಗುತ್ತಿದೆ. ಶಾಲಾ ಮಕ್ಕಳಿಗೆ ವಾರಕ್ಕೆ ಎರಡು ದಿನ ಮೊಟ್ಟೆ ಒದಗಿಸುವ ಕಾರ್ಯಕ್ರಮವನ್ನೂ ಪ್ರಾರಂಭಿಸಲಾಗಿದೆ. ಇವೆಲ್ಲವೂ ಬಡತನ ರೇಖೆಗಿಂತಲೂ ಕಡಿಮೆ ಇರುವ ಕುಟುಂಬಗಳಿಗೆ ಅನುಕೂಲವಾಗಿದೆ. ಅಲ್ಲದೆ, ಈ ಕುಟುಂಬಗಳಿಗೆ ಸೇರಿದ ಮಕ್ಕಳಲ್ಲಿ ಪೌಷ್ಟಿಕಾಂಶದ ಕೊರತೆ ನೀಗಿದೆ. ಶಾಲಾ ದಾಖಲಾತಿ ಹಾಗೂ ಹಾಜರಾತಿ ಪ್ರಮಾಣದಲ್ಲಿ ಹೆಚ್ಚಳವಾಗಿದೆ. ಕ್ಷೀರಧಾರೆ ಯೋಜನೆಯಡಿ ಪ್ರತಿ ಲೀಟರ್‌ಗೆ ಐದು ರೂ. ನಂತೆ ನೀಡುತ್ತಿರುವ ಪ್ರೋತ್ಸಾಹ ಧನದ ಮೊತ್ತ ವಾರ್ಷಿಕ 1240 ಕೋಟಿ ರೂ. ತಲುಪಿದೆ. ಬರದ ಬವಣೆಯ

ಈ ಸಂದರ್ಭದಲ್ಲೂ ರಾಜ್ಯದಲ್ಲಿ ಪ್ರತಿ ದಿನ 73 ಲಕ್ಷ ಲೀಟರ್ ಹಾಲು ಉತ್ಪಾದನೆಯಾಗುತ್ತಿದೆ. ಇದರಿಂದ ಗುಳೆ ಹೋಗುವ ಜನರ ಸಂಖ್ಯೆ ಗಣನೀಯ ಪ್ರಮಾಣದಲ್ಲಿ ಇಳಿಮುಖವಾಗಿದೆ.

ಕಳೆದ ಸಾಲಿನಲ್ಲಿ ಮುಂಗಾರು ವೈಫಲ್ಯದ ಸಮಯದಲ್ಲಿ ಉಂಟಾದ ಬೆಳೆ ಹಾನಿಗೆ ಹಾಗೂ ನೆರೆಯ ಸಂದರ್ಭದಲ್ಲಿ ಉಂಟಾದ ಬೆಳೆ ನಷ್ಟಕ್ಕೆ ಸಂಬಂಧಿಸಿದಂತೆ ಪರಿಹಾರವನ್ನು ಸಂತ್ರಸ್ತ ರೈತರ ಬ್ಯಾಂಕ್ ಖಾತೆಗಳಿಗೆ ನೇರವಾಗಿ ವರ್ಗಾಯಿಸಲಾಗಿದೆ. ಬರ ಪೀಡಿತ ಪ್ರದೇಶಗಳಿಗೆ ಖುದ್ದು ಭೇಟಿ ನೀಡಿ ಪರಿಶೀಲಿಸಲಾಗಿದೆ. ಸಚಿವ ಸಂಪುಟದ ನಾಲ್ಕು ಉಪ ಸಮಿತಿಗಳೂ ಬರ ಪರಿಹಾರ ಕಾಮಗಾರಿಗಳ ಉಸ್ತುವಾರಿ ಮಾಡಿದೆ.

ಜನ–ಜಾನುವಾರುಗಳಿಗೆ ಕುಡಿಯುವ ನೀರು, ಜನರಿಗೆ ಉದ್ಯೋಗ ಹಾಗೂ ಜಾನುವಾರುಗಳಿಗೆ ಮೇವು ಪೂರೈಸಿ ಒಂಭತ್ತು ಕೋಟಿಗೂ ಹೆಚ್ಚು ಅಂದರೆ 9.14 ಕೋಟಿ ಮಾನವ ದಿನಗಳನ್ನು ಸೃಜಿಸಿ ರಾಜ್ಯಕ್ಕೆ ಎದುರಾಗಿರುವ ಬರದ ಪರಿಸ್ಥಿತಿಯನ್ನು ರಾಜ್ಯ ಸರ್ಕಾರವು ಸಮರ್ಥವಾಗಿ ನಿರ್ವಹಿಸಿದೆ ಎಂದು ಸಿದ್ದರಾಮಯ್ಯ ಅವರು ಸದನಕ್ಕೆ ತಿಳಿಸಿದರು.

ರಾಜ್ಯದಲ್ಲಿ ವಿತ್ತೀಯ ಹೊಣೆಗಾರಿಕೆ ಅಧಿನಿಯಮ–2002 ಜಾರಿಯಾದ ನಂತರ ತಾವು ನಿಗಧಿತ ಒಂದು ವರ್ಷದ ಮೊದಲೇ ಆರ್ಥಿಕ ಶಿಸ್ತನ್ನು ತಾವು ಉಪಮುಖ್ಯಮಂತ್ರಿ ಹಾಗೂ ಹಣಕಾಸು ಸಚಿವರಾಗಿದ್ದ ಅವಧಿಯಲ್ಲಿ ಸಾಬೀತು ಮಾಡಿದ್ದಾಗಿ ತಿಳಿಸಿದ ಅವರು ವಿತ್ತೀಯ ಕೊರತೆ ಶೇಕಡಾ ಮೂರಕ್ಕೆ ಮೀರದಂತೆ ನಿರ್ವಹಿಸಬೇಕೆಂಬ ಕಾನೂನನ್ನು ಮುಖ್ಯಮಂತ್ರಿಯಾಗಿ ತಮ್ಮ ಅಧಿಕಾರಾವಧಿಯ ಕಳೆದ ಐದು ಆಯವ್ಯಯಗಳಲ್ಲೂ ಯಶಸ್ವಿಯಾಗಿ ಅನುಷ್ಠಾನಗೊಳಿಸಲಾಗಿದೆ. ಒಟ್ಟಾರೆ ರಾಜ್ಯ ದೇಶೀಯ ಉತ್ಪನ್ನದ ಶೇಕಡಾ 25 ರ ಮಿತಿಯೊಳಗೆ ಸಾಲ ಮಾಡಬೇಕೆಂದು ವಿತ್ತೀಯ ಹೊಣೆಗಾರಿಕಾ ಕಾಯಿದೆಯಲ್ಲಿ ಉಲ್ಲೇಖಿಸಿದ್ದು, ಇದನ್ನು ತಮ್ಮ ನೇತೃತ್ವದ ಕರ್ನಾಟಕ ಸರ್ಕಾರ ಸಮರ್ಥವಾಗಿ ಹಾಗೂ ಯಶಸ್ವಿಯಾಗಿ ನಿಭಾಯಿಸಿ ಕೊಂಡು ಬಂದಿದೆ ಎಂದ ಅವರು ನೆರೆಯ ಆಂಧ್ರ ಪ್ರದೇಶ, ತೆಲಂಗಾಣ, ತಮಿಳು ನಾಡು ಮತ್ತು ಕೇರಳ, ಗುಜರಾತ್, ಮಹಾರಾಷ್ಟ್ರ, ಮಧ್ಯ ಪ್ರದೇಶ ರಾಜ್ಯಗಳಲ್ಲಿನ ಆರ್ಥಿಕ ಸ್ಥಿತಿಗತಿಗಳ ಅಂಕಿ ಅಂಶಗಳನ್ನು ಉಲ್ಲೇಖಿಸಿ ರಾಜ್ಯದಲ್ಲಿನ ಆರ್ಥಿಕ ಶಿಸ್ತನ್ನು ಸದನಕ್ಕೆ ಸಾಬೀತುಪಡಿಸಿದರು.

ತಮ್ಮ ಸರ್ಕಾರ ಅಧಿಕಾರಕ್ಕೆ ಬಂದ ಮೇಲೆ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡಗಳ ಜನಸಂಖ್ಯೆಗೆ ಅನುಗುಣವಾಗಿ ಅನುದಾನ ಮೀಸಲಿರಿಸಿ ವಿಶೇಷ ಘಟಕ ಯೋಜನೆ ಹಾಗೂ ಗಿರಿಜನ ಉಪ ಯೋಜನೆಯಡಿ ಮೀಸಲಿರಿಸಿದ ಅನುದಾನವನ್ನು ಸದ್ಬಳಕೆ ಮಾಡುವ ವಿಶೇಷ ಕಾನೂನು ಜಾರಿಗೆ ತಂದ ಬಳಿಕ ಆ ವರ್ಗದ ಜನರಿಗೆ ಹಿಂದಿನ ಸರ್ಕಾರದ ಐದು ವರ್ಷಗಳ ಅವಧಿಯಲ್ಲಿ ಮಾಡಿದ ವೆಚ್ಚಕ್ಕಿಂತಲೂ ನಾಲ್ಕು ಪಟ್ಟು ಅನುದಾನವನ್ನು ಮೀಸಲಿರಿಸಿದ ಕೀರ್ತಿ ತಮ್ಮದಾಗಿದೆ. ಅದೇ ರೀತಿ ಕೃಷಿ, ತೋಟಗಾರಿಕೆ, ನೀರಾವರಿ, ಗ್ರಾಮೀಣಾಭಿವೃದ್ಧಿ ಹೀಗೆ ಎಲ್ಲಾ ಕ್ಷೇತ್ರಗಳಲ್ಲೂ ಹಿಂದಿನ ಸರ್ಕಾರದ ಐದು ವರ್ಷಗಳ ಅವಧಿಯಲ್ಲಿ ಮಾಡಿದ ವೆಚ್ಚಕ್ಕಿಂತಲೂ ತಮ್ಮ ಸರ್ಕಾರದ ನಾಲ್ಕು ವರ್ಷಗಳ ಅವಧಿಯಲ್ಲಿ ನಾಲ್ಕು ಪಟ್ಟು ವೆಚ್ಚ ಮಾಡಲಾಗಿದೆ.

ರಾಜ್ಯದಲ್ಲಿನ ಏಕೀಕೃತ ಮಾರುಕಟ್ಟೆಯ ವ್ಯವಸ್ಥೆಯನ್ನು ಕೇಂದ್ರ ಸರ್ಕಾರ ತನ್ನ ಆಯವ್ಯಯದಲ್ಲೂ ಅಳವಡಿಸಿಕೊಂಡು ಮಾದರಿ ಯೋಜನೆ ಎಂದು ಬಣ್ಣಿಸಿದೆ. ಮುಂದಿನ ತಿಂಗಳಿನಿಂದಲೇ ಏಕೀಕೃತ ಮಾರುಕಟ್ಟೆಗಳಲ್ಲಿ ರೈತರ ಉತ್ಪನ್ನಗಳಿಗೆ ಆನ್‌ಲೈನ್ ಮೂಲಕ ಪಾವತಿಸುವ ವ್ಯವಸ್ಥೆ ಜಾರಿಗೆ ತರಲು ರಾಜ್ಯ ಸರ್ಕಾರ ಯೋಜಿಸಿದೆ.

ಇ–ಟ್ರೇಡಿಂಗ್ ಮೂಲಕ ವ್ಯಾಪಾರ ಮಾಡಿದ ರಾಜ್ಯದ ರೈತರ ಉತ್ಪನ್ನಗಳಿಗೆ ಶೇಕಡಾ 38 ಹೆಚ್ಚು ಬೆಲೆ ದೊರೆತಿದೆ ಎಂಬುದು ಮತ್ತೊಂದು ಸಂತಸದ ಸಂಗತಿಯಾಗಿದೆ. ರಾಜ್ಯ ಸರ್ಕಾರದ ರೈತಪರ ಯೋಜನೆಗಳನ್ನು ನೀತಿ ಆಯೋಗವೂ ಅಭಿನಂದಿಸಿದೆ ಎಂದು ಮುಖ್ಯಮಂತ್ರಿ ಎರಡು ಗಂಟೆಗಳಿಗೂ ಹೆಚ್ಚಿನ ತಮ್ಮ ಸುದೀರ್ಘ ಉತ್ತರದಲ್ಲಿ ತಿಳಿಸಿದರು.

ನಂತರ, ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಕರ್ನಾಟಕ ಧನ ವಿಯೋಗ ವಿಧೇಯಕ – 2017 ಸಂಖ್ಯೆ 2 ಮತ್ತು 3 ಸದನದಲ್ಲಿ ಮಂಡನೆ ಮಾಡಿದರು. ಪರ್ಯಾಲೋಚನೆಯ ನಂತರ ಧ್ವನಿ ಮತದಿಂದ ಅಂಗೀಕಾರ ನೀಡಿದ ಸದನವು ಈ ಎರಡೂ ವಿಧೇಯಕಗಳಿಗೆ ಅನುಮೋದನೆ ನೀಡಿತು.

*******

ಡಿ ಪಿ ಎಂ : ಟಿ ಸಿ ಎಂ ಬಿ